ಬೆಂಗಳೂರು ನಗರ
ಸಂಚಾರ ಪೊಲೀಸ್

# ಸಂಚಾರ ಸಲಹೆ

ಗಣ್ಯ ವ್ಯಕ್ತಿಗಳು ಬೆಂಗಳೂರು ನಗರಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ವಾಹನಗಳ ಸುಗಮ ಸಂಚಾರಕ್ಕಾಗಿ ಈ ಕೆಳಕಂಡಂತೆ ಸೂಕ್ತ ಸಂಚಾರ ವ್ಯವಸ್ಥೆಯನ್ನು ಮಾಡಲಾಗಿದೆ.

**ದಿನಾಂಕ:29.04.2023 ನೇ ಏಪ್ರಿಲ್ ಮಧ್ಯಾಹ್ನ 02.00 ಗಂಟೆಯಿಂದ ರಾತ್ರಿ 07.30 ಗಂಟೆವರೆಗೆ**

**ಈ ಕೆಳಕಂಡ ರಸ್ತೆಗಳ ಬದಲಿಗೆ ಪರ್ಯಾಯ ರಸ್ತೆಗಳನ್ನು ಬಳಸಲು ಕೋರಿದೆ.**

- ಹಳೆ ವಿಮಾನ ನಿಲ್ದಾಣ ರಸ್ತೆ
- ಕಬ್ಬನ್ ರಸ್ತೆ
- ಅಂಬೇಡ್ಕರ್ ರಸ್ತೆ
- ನೃಪತುಂಗ ರಸ್ತೆ
- ಕೃಂಬಿಗಲ್ ರಸ್ತೆ
- ದೇವಾಂಗ ರಸ್ತೆ
- ಕೇಂಬ್ರಿಡ್ಜ್ ಲೇಔಟ್ ರಸ್ತೆ
- ಡಿಕನ್‌ಸನ್ ರಸ
- ಲಾಲ್ ಬಾಗ್ ವೆಸ್ಟ್ ಗೇಟ್ ರಸ್ತೆ
- ಕೆ.ಆರ್ ಸರ್ಕ
- ಆರ್.ವಿ ಕಾಲೇಜ್ ರಸ್ತೆ
- ಲಾಲ್ ಬಾಗ್ ಮುಖ್ಯ ರಸ್ತೆ
- ಬಸವನಗುಡಿ 50 ಅಡಿ ಕೆನರಾ ಬ್ಯಾಂಕ್ ರಸ್ತೆ

**ಈ ರಸ್ತೆಗಳಲ್ಲಿ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಿ ಈ ಕೆಳಕಂಡಂತೆ ವಾಹನಗಳ ಮಾರ್ಗ ಬದಲಾವಣೆ ಮಾಡಲಾಗಿರುತ್ತದೆ.**

- ಮಾಗಡಿ ಕಡೆಯಿಂದ ಬೆಂಗಳೂರು ನಗರದ ಕಡೆಗೆ ಬರುವ ವಾಹನಗಳು ತಾವರೆಕೆರೆ ಜಂಕ್ಷನ್‌ನಲ್ಲಿ ಬಲತಿರುವು ಪಡೆದು ಹೆಮ್ಮಿಗೆಪುರ – ಕೊಮ್ಮಘಟ್ಟ ಕೆಂಗೇರಿ ಮೂಲಕ ಮೈಸೂರು ರಸ್ತೆಗೆ ಸಂಚರಿಸಬಹುದಾಗಿದೆ.
- ಮಾಗಡಿ ಕಡೆಯಿಂದ ತುಮಕೂರು ರಸ್ತೆ ಕಡೆಗೆ ಸಂಚರಿಸುವ ವಾಹನಗಳು ತಾವರೆಕೆರೆ ಜಂಕ್ಷನ್‌ನಲ್ಲಿ ಎಡತಿರುವು ಪಡೆದು ಸೊಂಡೇಕೊಪ್ಪ – ನೆಲಮಂಗಲ ಮೂಲಕ ಸಂಚರಿಸಬಹುದಾಗಿರುತ್ತದೆ.
- ತುಮಕೂರು ಕಡೆಯಿಂದ ಬಂದು ನೈಸ್ ರಸ್ತೆಯಲ್ಲಿ ಸಂಚರಿಸುವ ಸರಕು ವಾಹನಗಳು ನೆಲಮಂಗಲ ಸೊಂಡೇಕೊಪ್ಪ ಬೈಪಾಸ್‌ನಲ್ಲಿ ಬಲತಿರುವು ಪಡೆದು ಸೊಂಡೇಕೊಪ್ಪ – ತಾವರೆಕೆರೆ – ಹೆಮ್ಮಿಗೆಪುರ – ಕೊಮ್ಮಘಟ್ಟ ಕೆಂಗೇರಿ ಮೂಲಕ ಮೈಸೂರು ರಸ್ತೆಗೆ ಸಂಚರಿಸಬಹುದಾಗಿದೆ.
- ನಗರದ ಒಳಭಾಗದಿಂದ ಮಾಗಡಿ ಕಡೆಗೆ ಸಂಚರಿಸುವ ವಾಹನಗಳು ಎಂ.ಸಿ ಸರ್ಕಲ್‌ನಲ್ಲಿ ಎಡತಿರುವು ಪಡೆದು ಮೈಸೂರು ರಸ್ತೆ ಕೆಂಗೇರಿ – ಕೊಮ್ಮಘಟ್ಟ – ಹೆಮ್ಮಿಗೆಪುರ – ತಾವರೆಕೆರೆ ಮೂಲಕ ಸಂಚರಿಸಬಹುದಾಗಿದೆ.

- ನಾಯಂಡಹಳ್ಳಿ ಕಡೆಯಿಂದ ತುಮಕೂರು ರಸ್ತೆ ಕಡೆಗೆ ಬರುವ ವಾಹನಗಳು ನಾಯಂಡಹಳ್ಳಿ ಜಂಕ್ಷನ್‌ನಲ್ಲಿ ಮೈಸೂರು ರಸ್ತೆಗೆ ಚಲಿಸಿ ಕೆಂಗೇರಿ – ಆರ್ ಆರ್ ಕಾಲೇಜು ಮೂಲಕ ರಾಮೋಹಳ್ಳಿ, ಚಂದ್ರಪ್ಪ ಸರ್ಕಲ್ – ತಾವರೆಕೆರೆ ಮೂಲಕ ಮಾಗಡಿ ರಸ್ತೆ ಮತ್ತು ತುಮಕೂರು ರಸ್ತೆಗೆ ಸಂಚರಿಸಬಹುದಾಗಿದೆ.
- ಸಿ.ಎಂ.ಟಿ.ಐ ಜಂಕ್ಷನ್‌ನಿಂದ ನಾಯಂಡಹಳ್ಳಿ ಮೈಸೂರು ರಸ್ತೆ ಕಡೆಗೆ ಹೋಗುವ ವಾಹನಗಳು ಗೊರಗುಂಟೆಪಾಳ್ಯ – ವೆಸ್ಟ್ ಆಫ್ ಕಾರ್ಡ್ ರಸ್ತೆ – ಎಂ.ಸಿ ಸರ್ಕಲ್ – ವಿಜಯನಗರ ಮೂಲಕ ಮೈಸೂರು ರಸ್ತೆಗೆ ಸಂಚರಿಸಬಹುದಾಗಿದೆ.
- ಹಳೇ ರಿಂಗ್ ರಸ್ತೆಯಲ್ಲಿ ಕೆಂಗೇರಿ ಕಡೆಯಿಂದ ತುಮಕೂರು ರಸ್ತೆ ಕಡೆಗೆ ಬರುವ ವಾಹನಗಳು ಉಲ್ಲಾಳ ಜಂಕ್ಷನ್ ನಲ್ಲಿ ಎಡತಿರುವು ಪಡೆದು ಉಲ್ಲಾಳ ವಿಲೇಜ್, ರಾಮಸಂದ್ರ ಬ್ರಿಡ್ಜ್ – ಹೆಮ್ಮಿಗೆಪುರ – ತಾವರೆಕೆರೆ ಮೂಲಕ ತುಮಕೂರು ರಸ್ತೆಗೆ ಸಂಚರಿಸಬಹುದಾಗಿದೆ.

**ಈ ಮೇಲ್ಕಂಡಂತೆ ಮಾಡಲಾದ ಸಂಚಾರ ಮಾರ್ಪಾಡುಗಳಿಗೆ ಸಾರ್ವಜನಿಕರು ಸಹಕರಿಸಬೇಕಾಗಿ ಕೋರಿದೆ.**